# ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 179 ಯುಬಿವಿ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 2–5–2015

ಇಂದ
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು – 560 001.

ಇವರಿಗೆ
ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಬೆಂಗಳೂರು–560 056.

ಮಾನ್ಯರೆ,

ವಿಷಯ:– ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ ಇದರಿಂದ ಸೀನಿಯರ್ ಸೆಕೆಂಡರಿ ಪರೀಕ್ಷೆಯನ್ನು ಉತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ರಾಜ್ಯದ ವಿಶ್ವವಿದ್ಯಾಲಯಗಳ ಪದವಿ ಶಿಕ್ಷಣಕ್ಕೆ ಅವಕಾಶ ಕಲ್ಪಿಸುವ ಬಗ್ಗೆ.

ಉಲ್ಲೇಖ:– ಪ್ರಾದೇಶಿಕ ನಿರ್ದೇಶಕರು, ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್, ಬೆಂಗಳೂರು, ಇವರ ಪತ್ರ ಸಂಖ್ಯೆ:F-72/NISO/RC-BLR/ Recognizing/2015, dt: 2-5-2015.

---

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಕೇಂದ್ರ ಮಾನವ ಸಂಪನ್ಮೂಲ ಇಲಾಖೆಯ ಭಾಗವಾಗಿರುವ National Institute of Open Schooling ಈ ಸಂಸ್ಥೆಯಿಂದ 10+2 ವಿದ್ಯಾರ್ಹತೆಯನ್ನು ಹೊಂದಿರುವ ವಿದ್ಯಾರ್ಥಿಗಳಿಗೆ ಬೆಂಗಳೂರು ವಿಶ್ವವಿದ್ಯಾಲಯದ ಪದವಿ ಶಿಕ್ಷಣಕ್ಕೆ ಪ್ರವೇಶಾತಿ ನೀಡಲಾಗುತ್ತಿಲ್ಲವೆಂದು ಸಂಸ್ಥೆಯ ಪ್ರಾದೇಶಿಕ ನಿರ್ದೇಶಕರು ಸದರಿ ಪತ್ರದಲ್ಲಿ ತಿಳಿಸುತ್ತಾ, ವಿಶ್ವವಿದ್ಯಾಲಯದ ಧನಸಹಾಯ ಆಯೋಗದ ಮಾರ್ಗಸೂಚಿಗಳನ್ವಯ ಮುಕ್ತ ಶಾಲಾ ಪದ್ಧತಿಯಲ್ಲಿ 10+2 ಶಿಕ್ಷಣವನ್ನು ಪೂರೈಸಿರುವ ವಿದ್ಯಾರ್ಥಿಗಳಿಗೂ ಪದವಿ ಶಿಕ್ಷಣವನ್ನು ಮುಂದುವರಿಸಲು ಅವಕಾಶವನ್ನು ಕಲ್ಪಿಸಲಾಗಿರುವುದರಿಂದ ಈ ಸಂಸ್ಥೆಯಿಂದ 10+2 ವಿದ್ಯಾರ್ಹತೆಯನ್ನು ಹೊಂದಿರುವ ವಿದ್ಯಾರ್ಥಿಗಳಿಗೆ ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಪದವಿ ಶಿಕ್ಷಣವನ್ನು ಮುಂದುವರಿಸಲು ಅವಕಾಶ ಕಲ್ಪಿಸಲು ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಸೂಕ್ತ ಸೂಚನೆಯನ್ನು ನೀಡುವಂತೆ ಕೋರಿರುತ್ತಾರೆ.

ಈ ವಿಷಯ ಕುರಿತಂತೆ ಪರಿಶೀಲಿಸಲಾಗಿ, ಬೆಂಗಳೂರು ವಿಶ್ವವಿದ್ಯಾಲಯವು ಪದವಿ ತರಗತಿಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಹೊರಡಿಸಿರುವ ದಿ: 5–3–2015ರ ಸುತ್ತೋಲೆಯಲ್ಲಿ ವಿಶ್ವವಿದ್ಯಾಲಯ ಧನಸಹಾಯ ಆಯೋಗದ ರೆಗ್ಯುಲೇಶನ್‌ನಲ್ಲಿನ ಉಪಬಂಧದ ಉದ್ಧೃತ ಭಾಗವನ್ನು ಈ ಕೆಳಕಂಡಂತೆ ನಮೂದಿಸಲಾಗಿರುತ್ತದೆ:–

> No student shall be eligible for admission to the 1st degree course through nonformal/distance education unless he has successfully completed 12 years schooling through an examination conducted by a Board/University.

ಆದರೆ, UGC (Minimum Standards of Instruction for the grant of the first Degree through formal education) Regulations, 2003 ರ ಕಂಡಿಕೆ 2.1 ರಲ್ಲಿ ಈ ಕೆಳಕಂಡಂತೆ ಇರುತ್ತದೆ:–

> No student shall be eligible for admission to a first degree programme in any of the faculties unless he/she successfully passed the examination conducted by a Board/University at the +2 level of schooling (either through formal schooling for 12 years, or through open school system) or its equivalent.

ಬೆಂಗಳೂರು ವಿಶ್ವವಿದ್ಯಾಲಯದ ದಿ: 5-3-2015ರ ಸುತ್ತೋಲೆಯಲ್ಲಿ ಮುಕ್ತ ಶಾಲಾ ಪದ್ಧತಿಯಲ್ಲಿ 10+2 ಹಂತದ ಶಿಕ್ಷಣವನ್ನು ಪೂರೈಸಿರುವ ವಿದ್ಯಾರ್ಥಿಗಳಿಗೆ ಪದವಿ ಶಿಕ್ಷಣವನ್ನು ಮುಂದುವರಿಸಲು ಯುಜಿಸಿಯ ರೆಗ್ಯುಲೇಶನ್‌ಗಳಲ್ಲಿ ಕಲ್ಪಿಸಲಾಗಿರುವ ಉಪಬಂಧಧಲ್ಲಿನ ಅವಕಾಶದ ಅಂಶಗಳನ್ನು ಕೈಬಿಡಲಾಗಿರುವುದು ಕಂಡುಬರುತ್ತದೆ. ಆದ್ದರಿಂದ ಸದರಿ ಸುತ್ತೋಲೆಯಲ್ಲಿ ಯುಜಿಸಿಯ ಮಾರ್ಗಸೂಚಿಗಳಲ್ಲಿನ ಉಪಬಂಧಗಳನ್ನು ಸೂಕ್ತವಾಗಿ ಅಳವಡಿಸಿಕೊಂಡು ಕೇಂದ್ರ ಮಾನವ ಸಂಪನ್ಮೂಲ ಇಲಾಖೆಯಡಿ ನಡೆಯುತ್ತಿರುವ National Institute of Open Schooling ಈ ಸಂಸ್ಥೆಯಿಂದ 10+2 ಹಂತದ ಶಿಕ್ಷಣವನ್ನು ಪೂರೈಸಿರುವ ವಿದ್ಯಾರ್ಥಿಗಳಿಗೆ ಬೆಂಗಳೂರು ವಿಶ್ವವಿದ್ಯಾಲಯದ ಪದವಿ ಶಿಕ್ಷಣಕ್ಕೆ ಪ್ರವೇಶಾತಿ ನೀಡುವಲ್ಲಿ ಸೂಕ್ತ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಕೋರಲು ನಾನು ನಿರ್ದೇಶಿತನಾಗಿದ್ದೇನೆ.

ಮುಂದುವರೆದು, UGC (Minimum Standards of Instruction for the grant of the first Degree through formal education) Regulations, 2003 ರ ಕಂಡಿಕೆ 2.1 ರಲ್ಲಿ ಮುಕ್ತ ಶಾಲಾ ಪದ್ಧತಿಯಲ್ಲಿ 10+2 ಶಿಕ್ಷಣವನ್ನು ಪೂರೈಸಿರುವ ವಿದ್ಯಾರ್ಥಿಗಳಿಗೆ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಪದವಿ ಶಿಕ್ಷಣಕ್ಕೆ ಪ್ರವೇಶಾತಿ ನೀಡುವಲ್ಲಿ ಸೂಕ್ತ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಕೋರಲು ನಾನು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

2/05/15

(ಎಸ್.ಹೆಚ್.ಕುರಿಯವರ್)
ಸರ್ಕಾರದ ಉಪ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು)

ಪ್ರತಿಯನ್ನು ಮುಂದಿನ ಅಗತ್ಯ ಕ್ರಮಕ್ಕಾಗಿ:-

1. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು-570 005.
2. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ-580 003.
3. ಕುಲಸಚಿವರು, ಗುಲ್ಬರ್ಗಾ ವಿಶ್ವವಿದ್ಯಾಲಯ, ಗುಲ್ಬರ್ಗಾ-585 106.
4. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು-574 199.
5. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ-577 451.
6. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ-583 276.
7. ಕುಲಸಚಿವರು, ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ಬಿಜಾಪುರ-586 101.
8. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು-572 101.
9. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು.
10. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ, ಬೆಳಗಾವಿ.
11. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
12. ಕುಲಸಚಿವರು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
13. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
14. ಕುಲಸಚಿವರು, ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ವಿಜಯನಗರ 4ನೇ ಹಂತ, 2ನೇ ಘಟ್ಟ, ಬಸವನಹಳ್ಳಿ ಅಂಚೆ, ಮೈಸೂರು-560 017.
15. ಕುಲಸಚಿವರು, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಜಯಚಾಮರಾಜೇಂದ್ರ ಸಂಸ್ಕೃತ ಕಾಲೇಜು ಆವರಣ, ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು-560 018.
16. ಕುಲಸಚಿವರು, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘದ ಕಟ್ಟಡ, ನಂ.2/106, 3ನೇ ಮಹಡಿ, 17ನೇ ಅಡ್ಡರಸ್ತೆ, ಮಾಗಡಿ ಕಾರ್ಡ್ ರಸ್ತೆ, ವಿಜಯನಗರ, ಬೆಂಗಳೂರು-560 040.

---